7. ಶಾಸನ ರಚನೆ:

(ಎ) ವಿಧೇಯಕ ಮಂಡನೆ

(1) ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕ , 2009.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ "2009ರ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: (ಅನುಬಂಧ–I) ವಿಧೇಯಕವನ್ನು ಮಂಡಿಸಲಾಗಿದೆ.

2. ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಗೃಹಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2009ರ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ "2009ರ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕಿ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)(ಮಾನ್ಯ ಗೃಹಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2009ರ ದಂಡಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: (ಅನುಬಂಧ–II) ವಿಧೇಯಕವನ್ನು ಮಂಡಿಸಲಾಗಿದೆ.

3. ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕ 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ.ಪಿ. ರೇಣುಕಾಚಾರ್ಯ (ಅಬ್ಕಾರಿ ಸಚಿವರು): ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: "2009ರ ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ.ಪಿ. ರೇಣುಕಾಚಾರ್ಯ (ಅಬಕಾರಿ ಸಚಿವರು): ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: (ಅನುಬಂಧ–III) ವಿಧೇಯಕವನ್ನು ಮಂಡಿಸಲಾಗಿದೆ.

4. ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ 2009.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಶಿವರಾಜ್ ಎಸ್. ತಂಗಡಗಿ (ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು): ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ